ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(3)/11/2022

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 07.06.2022

**ಸುತ್ತೋಲೆ**

**ವಿಷಯ :** 2022-23ನೇ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಇಡಿ 55 ಡಿಟಿಇ 2022, ದಿನಾಂಕ: 04.06.2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರದಲ್ಲಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ 2022-23ನೇ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು 2022-23ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದವರೆಗೆ(ಮಾರ್ಚ್-2023) ಪಡೆಯಲು ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ. ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆಯಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ, 2022-23ನೇ ಶೈಕ್ಷಣಿಕ ಸಾಲಿಗೆ ಸಂಸ್ಥೆಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು, ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅರೆಕಾಲಿಕ ಉಪನ್ಯಾಸಕರ ಹುದ್ದೆಗೆ ಈ ಹಿಂದೆ ಸೇವೆ ಸಲ್ಲಿಸಿದ / ಆಸಕ್ತರಿಂದ ಸಂಸ್ಥೆಯ ಹಂತದಲ್ಲಿ ಅರ್ಜಿ ಪಡೆದು, ಪ್ರಾಂಶುಪಾಲರ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ವಿಷಯಗಳ ವಿಭಾಗದ ಮುಖ್ಯಸ್ಥರು / ಹಿರಿಯ ಉಪನ್ಯಾಸಕರು ಮತ್ತು ಆಡಳಿತ ವಿಭಾಗದ ಅಧಿಕಾರಿ / ಸಿಬ್ಬಂದಿ ವರ್ಗದವರನ್ನೊಳಗೊಂಡ ಆಯ್ಕೆ ಸಮಿತಿ ರಚಿಸಿ, ಅರ್ಜಿಗಳನ್ನು ಪರಿಶೀಲಿಸಿ, ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಅರೆಕಾಲಿಕ ಉಪನ್ಯಾಸಕರನ್ನು ಪ್ರಾಂಶುಪಾಲರ ಹಂತದಲ್ಲಿ ನೇಮಿಸಿಕೊಳ್ಳಲು ಕೆಳಕಂಡ ಷರತ್ತು / ನಿಬಂಧನೆಗಳಿಗೊಳಪಟ್ಟು ಅನುಮತಿ ನೀಡಲಾಗಿದೆ.

**ಷರತ್ತು / ನಿಬಂಧನೆಗಳು:-**

1. ಸದರಿ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯಲ್ಲಿ ಉಪಲಬ್ಧ ಕಾರ್ಯಭಾರಕ್ಕೆ ಅನುಗುಣವಾಗಿ ಮತ್ತು ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ ಸಿಮೀತಗೊಳಿಸಿ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು 2022-23ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದವರೆಗೆ(ಮಾರ್ಚ್-2023) ಮಾತ್ರ ಪಡೆಯತಕ್ಕದ್ದು;
2. ಈ ಹಿಂದೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ ಅರೆಕಾಲಿಕ ಉಪನ್ಯಾಸಕರಿಗೆ ಆದ್ಯತೆ ನೀಡುವುದು;

3. ಅರೆಕಾಲಿಕ ಉಪನ್ಯಾಸಕರ ಸಂಖ್ಯೆಯನ್ನು ಕಡಿಮೆ ಮಾಡಬೇಕಾದ ಸಂದರ್ಭದಲ್ಲಿ, ಅರೆಕಾಲಿಕ ಉಪನ್ಯಾಸಕರಾಗಿ ಹೆಚ್ಚಿನ ಅವಧಿ ಸೇವೆ ಸಲ್ಲಿಸಿದವರಿಗೆ ಅವಕಾಶ ನೀಡಿ ಕಡಿಮೆ ಅವಧಿಯ ಸೇವೆ ಸಲ್ಲಿಸಿದವರನ್ನು ಕೈಬಿಡುವುದು.

"ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"

ಜಂಟಿ ನಿರ್ದೇಶಕರು(ಆಡಳಿತ),
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ **(ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಂಡಿರುವ ಬಗ್ಗೆ ಅನುಮೋದನೆಗಾಗಿ ಒಂದು ವಾರದೊಳಗೆ ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದೆ)**

ಪ್ರತಿ:-

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

## ಅನುಬಂಧ

**2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾದ ಸಂಖ್ಯಾ ವಿವರ**

| ಕ್ರ.ಸಂ. | ಸಂಸ್ಥೆಯ ಹೆಸರು | ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾದ ಸಂಖ್ಯೆ |
|---|---|---|
| 1. | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 16 |
| 2. | ಸರ್ಕಾರಿ (ಸಂಜೆ) ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 10 |
| 3. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ | 13 |
| 4. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | 20 |
| 5. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ | 13 |
| 6. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ | 17 |
| 7. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ | 06 |
| 8. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ | 12 |
| 9. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ | 33 |
| 10. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ | 19 |
| 11. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು | 26 |
| 12. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ತಳಕಲ್ | 43 |
| 13. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ | 32 |
| 14. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಮೊಸಳೆಹೊಸಳ್ಳಿ | 32 |
| 15. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಳ್ಳಕೆರೆ | 08 |
| ಒಟ್ಟು | | **300** |

"ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"

ಜಂಟಿ ನಿರ್ದೇಶಕರು(ಆಡಳಿತ),
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

## ನಮೂನೆ

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಬೋಧಕ ಸಿಬ್ಬಂದಿ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ನೇಮಕ ಮಾಡಿಕೊಳ್ಳಲಾದ ಅರೆಕಾಲಿಕ ಉಪನ್ಯಾಸಕರಿಗೆ ಅನುಮೋದನೆ ನೀಡುವ ಕುರಿತು.

ಸಂಸ್ಥೆಯ ಹೆಸರು :

| ಕ್ರ. ಸಂ. | ವಿಭಾಗ | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪೂರ್ಣಕಾಲಿಕ ಉಪನ್ಯಾಸಕರ ವಿವರ | ಈ ಸಾಲಿಗೆ (ಸೆಮಿಸ್ಟರ್) ಪ್ರವೇಶ ಪಡೆದಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ (ವಿಭಾಗವಾರು) | ಎಐಸಿಟಿಇ ನಿಯಮ / ಇಲಾಖಾ ಆದೇಶ ಪ್ರಕಾರ ಪ್ರತಿ ವಿಭಾಗದಲ್ಲಿ ಬೋಧಿಸಬೇಕಾಗಿರುವ ಒಟ್ಟು ಯೂನಿಟ್‌ಗಳು | ಕಾರ್ಯನಿರ್ವಹಿಸುತ್ತಿರುವ ಪೂರ್ಣಕಾಲಿಕ ಉಪನ್ಯಾಸಕರಿಗೆ ಹಂಚಲಾಗಿರುವ ಒಟ್ಟು ಯೂನಿಟ್‌ಗಳು | ಕೊರತೆ ಬೀಳುವ ಒಟ್ಟು ಯೂನಿಟ್‌ಗಳು | ಉಳಿಕೆಯಾಗುವ ಕಾರ್ಯಭಾರಕ್ಕೆ ಅನುಗುಣವಾಗಿ ನೇಮಕಾತಿ ಮಾಡಲಾದ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ | ಪ್ರಸ್ತುತ ನೇಮಕಾತಿ ಮಾಡಿಕೊಳ್ಳಲಾದ ಅರೆಕಾಲಿಕ ಉಪನ್ಯಾಸಕರ ಹೆಸರು | ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ಪಡೆದ ದರ್ಜೆ | ವಯಸ್ಸು | ಅರೆಕಾಲಿಕ ಉಪನ್ಯಾಸಕರಿಗೆ ಹಂಚಲಾದ ಒಟ್ಟು ಯೂನಿಟ್‌ಗಳು | ನೇಮಕಾತಿ ಅವಧಿ | ಷರಾ |
|---|---|---|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 |
| | | | | | | | | | | | | | |

ಷರಾ:- ನೇಮಕ ಮಾಡಿಕೊಂಡಿರುವ ಅರೆಕಾಲಿಕ ಉಪನ್ಯಾಸಕರ ವಿದ್ಯಾರ್ಹತೆ ದಾಖಲೆಗಳನ್ನು ಸಂಸ್ಥೆಯಲ್ಲಿಯೇ ಇರಿಸತಕ್ಕದ್ದು.

ಪ್ರಾಂಶುಪಾಲರ ದೃಢೀಕರಣ